ಕಬ್ಬು ಸಾಗಾಣಿಕೆ.

1290 (ಗ.ಪ್ರ.ಇ) ಶ್ರೀ ಉಮೇಶ್ ವಿಶ್ವನಾಥ ಕತ್ತಿ (ಹುಕ್ಕೇರಿ) :— ಮಾನ್ಯ ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಬೆಳಗಾವಿ ಜಿಲ್ಲೆಯಲ್ಲಿ ರೈತರು ಬೆಳೆದಿರುವಂತಹ ಕಬ್ಬು ಹೊರ ರಾಜ್ಯಕ್ಕೆ ಕಳಿಸದಂತೆ ಸರ್ಕಾರ ಆದೇಶ ಹೊರಡಿಸಿದೆಯೇ;

ಆ) ಯಾವ ಕಾರಣಕ್ಕಾಗಿ ರೈತರು ಬೆಳೆದಿರುವ ಕಬ್ಬನ್ನು ಹೊರ ರಾಜ್ಯಕ್ಕೆ ಕಳಿಸದಂತೆ ಆದೇಶಿಸಲಾಗಿದೆ;

ಇ) ಹೊರ ರಾಜ್ಯದ ಸಕ್ಕರೆ ಕಾರ್ಖಾನೆಗಳು ರೈತರಿಗೆ ನೀಡುತ್ತಿರುವ ಕಬ್ಬಿನ ದರದಂತೆ ಈ ಭಾಗದ ರೈತರಿಗೂ ನೀಡಲು ಕ್ರಮ ಕೈಗೊಳ್ಳಲಾಗುವುದೇ;

ಈ) ಹೊರ ರಾಜ್ಯಕ್ಕೆ ಕಬ್ಬು ಕಳಿಸದಂತೆ ತಾತ್ಕಾಲಿಕ ನಿರ್ಬಂಧವನ್ನು ಹಿಂತೆಗೆದುಕೊಳ್ಳಲು ಆದೇಶಿಸಲಾಗುವುದೇ?

ಶ್ರೀ ಎ. ಕೃಷ್ಣಪ್ಪ (ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು) :—

ಅ) ಹೊರರಾಜ್ಯಕ್ಕೆ ಕಬ್ಬು ಸಾಗಾಣಿಕೆಯಾಗದಂತೆ ತಡೆಯಲು ಆದೇಶ ಹೊರಡಿಸಲಾಗಿದೆ.

ಆ) ರಾಜ್ಯದಲ್ಲಿ ಪ್ರಸಕ್ತ ಸಾಲಿನಲ್ಲಿ ಸಮರ್ಪಕವಾಗಿ ಮಳೆಯಾಗದೆ ಇದ್ದುದರಿಂದ, ಕಬ್ಬಿನ ಬೆಳೆ ಪ್ರಮಾಣ ಕಡಿಮೆಯಾಗಿದೆ ಎಂದು ಗುರುತಿಸಿರುವುದರಿಂದ ಜಿಲ್ಲೆಯ ಸಕ್ಕರೆ ಕಾರ್ಖಾನೆಗಳಿಗೆ ಕಬ್ಬಿನ ಕೊರತೆ ಬೀಳುವುದೆಂದು ಹೆಚ್ಚಿನ ಕಾರ್ಖಾನೆಗಳಿಂದ ಈ ಬೇಡಿಕೆ ಬಂದಿರುವುದರಿಂದ ಅದನ್ನು ವಿಮರ್ಶಿಸಿ ಕೆಲವು ರಾಜ್ಯಕ್ಕೆ ಕಬ್ಬು ಸಾಗಾಣಿಕೆಯನ್ನು ಮಾಡದಂತೆ ಸರ್ಕಾರ ಆದೇಶ ಹೊರಡಿಸಿರುತ್ತದೆ.

ಇ) ಕಬ್ಬಿನ ದರ ನಿಗದಿಪಡಿಸಲು ರಾಜ್ಯ ಸರ್ಕಾರಕ್ಕೆ ಅಧಿಕಾರವಿರುವುದಿಲ್ಲ. ಕಬ್ಬಿನ ದರವನ್ನು ಭಾರತ ಸರ್ಕಾರವು ಎಸ್.ಎಂ.ಪಿ. ರೂಪದಲ್ಲಿ ನಿಗದಿಪಡಿಸುತ್ತಿದೆ. ರಾಜ್ಯದಲ್ಲಿ ಸಕ್ಕರೆ ಕಾರ್ಖಾನೆಗಳೇ ಕಬ್ಬಿನ ದರವನ್ನು ಕಬ್ಬು ಬೆಳೆಗಾರರೊಂದಿಗೆ ಸಮಾಲೋಚಿಸಿ ನಿಗದಿಪಡಿಸಿಕೊಂಡು ಅವರಿಗೆ ಪಾವತಿಸುತ್ತಿದೆ.

ಈ) ಪ್ರಸಕ್ತ ಸಾಲಿನಲ್ಲಿ ಕಬ್ಬಿನ ಇಳುವರಿಯಲ್ಲಿ ಕೊರತೆ ಬೀಳುವುದನ್ನು ಗಮನದಲ್ಲಿಟ್ಟುಕೊಂಡು ಬೆಳಗಾಂ ಜಿಲ್ಲೆಯು ಸೇರಿದಂತೆ ಕೆಲವು ಜಿಲ್ಲೆಗಳಿಂದ ಮಾತ್ರ ಹೊರ ರಾಜ್ಯಕ್ಕೆ ಸಾಗಾಣಿಕೆ ಮಾಡುವುದನ್ನು ನಿಷೇಧಿಸಲಾಗಿದೆ.

ರಾಜ್ಯದ ಬೀದರ್ ಹಾಗೂ ಗುಲ್ಬರ್ಗಾ ಜಿಲ್ಲೆಯಲ್ಲಿ ಅಧಿಕವಾಗಿ ಕಬ್ಬು ಬೆಳೆ ಇರುವುದರ ಬಗ್ಗೆ ಜಿಲ್ಲಾಧಿಕಾರಿಗಳು ನೀಡಿದ ಮಾಹಿತಿಯನ್ನು ಆಧರಿಸಿ ಸದರಿ ಜಿಲ್ಲೆಗಳಿಗೆ ಈ ಆದೇಶವನ್ನು ಸಡಿಲಗೊಳಿಸಿ ಹಾಲಿ ಕಾರ್ಯ ನಿರ್ವಹಿಸುತ್ತಿರುವ ಸಕ್ಕರೆ ಕಾರ್ಖಾನೆಗಳ ಕಬ್ಬು ನುರಿಸುವಿಕೆಗೆ ಧಕ್ಕೆಯಾಗದ ರೀತಿಯಲ್ಲಿ ಹೊರ ರಾಜ್ಯಕ್ಕೆ ಕಬ್ಬು ಸಾಗಾಣಿಕೆಗೆ ಅನುಮತಿ ನೀಡಲಾಗಿತ್ತು. ಬೆಳಗಾಂ ಜಿಲ್ಲೆಗೆ ಸಂಬಂಧಿಸಿದಂತೆ ಆ ಜಿಲ್ಲೆಯ ಕಾರ್ಯಕ್ಷಾಮ್ಯಪ್ತಿಯಲ್ಲಿ ಬರುವ ಕಾರ್ಖಾನೆಗಳು ತಮಗೆ ಬೆಚ್ಚನ ಕೊರತೆ ಬೀಳುವುದೆಂಬ ಆತಂಕ ವ್ಯಕ್ತಪಡಿಸಿದ್ದರಿಂದ ಈ ನಿಷೇಧವನ್ನು ವಿಧಿಸಲಾಗಿದೆ. ಈ ಸಂಬಂಧ ಬೆಳಗಾಂ ಜಿಲ್ಲೆ ಕಬ್ಬು ಬೆಳೆಗಾರರು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ, ರಿಟ್ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಸದರಿ ರಿಟ್ ಅರ್ಜಿಯನ್ನು ಮಾನ್ಯ ಉಚ್ಚ ನ್ಯಾಯಾಲಯವು ವಿಲೇವಾರಿ ಮಾಡುತ್ತಾ, ಹೆಚ್ಚುವರಿ ಕಬ್ಬು ಜಿಲ್ಲೆಯಲ್ಲಿ ಲಭ್ಯವಿದ್ದಲ್ಲಿ, ರೈತರು ಜಿಲ್ಲಾಧಿಕಾರಿಗಳಿಗೆ ಅವರ ಮನವಿಯನ್ನು ಸಲ್ಲಿಸಲು ಮತ್ತು ಜಿಲ್ಲಾಧಿಕಾರಿಗಳು ನಿಯಮಾನುಸಾರ ಅಂತಹ ಮನವಿಯನ್ನು ವಿಲೇವಾರಿ ಮಾಡಲು ಆದೇಶ ನೀಡಿರುತ್ತದೆ.

ಸಕ್ಕರೆ ಕಾರ್ಖಾನೆಗಳಿಂದ ರೈತರಿಗೆ ಬಿಚ್ಚನ ಬೆಲೆ ಬಾಕಿ ಪಾವತಿ ಮಾಡುವ ಬಗ್ಗೆ.

1291 (೧೨೩೦) ಶ್ರೀ ಉಮೇಶ್ ವಿಶ್ವನಾಥ ಕತ್ತಿ (ಹುಕ್ಕೇರಿ) :— ಮಾನ್ಯ ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

೧) ರಾಜ್ಯದ ಬೆಳಗಾಂ ಜಿಲ್ಲೆಯ ರಾಯಬಾಗ್ ಸಕ್ಕರೆ ಕಾರ್ಖಾನೆಗೆ ನುರಿಸಲು ಕಬ್ಬು ಪೂರೈಸಿದ ರೈತರಿಗೆ ಕಬ್ಬಿನ ಬಗ್ಗೆ ಬಾಕಿ ಹಣ ನೀಡಲು ಸರ್ಕಾರ ತೆಗೆದುಕೊಂಡ ಕ್ರಮವೇನು;

೨) ಎಷ್ಟು ರೈತರಿಗೆ ಜಿಲ್ಲಾಧಿಕಾರಿಗಳ ಮೂಲಕ ಬಾಕಿ ಹಣ ನೀಡಲಾಗಿದೆ;

೩) ಬಾಕಿ ಹಣವನ್ನು ನೀಡಲು ಯಾವ ಯಾವ ಸಂಸ್ಥೆಯಿಂದ ಹಣವನ್ನು ಪಡೆಯಲಾಗಿದೆ;

೪) ರೈತರು ನಡೆಸುತ್ತಿರುವ ಧರಣಿಯನ್ನು ಕೈಬಿಡಲು ಅವರಿಗೆ ಕಾರ್ಖಾನೆಯಿಂದ ಬರಬೇಕಾದ ಬಾಕಿ ಹಣವನ್ನು ಪಾವತಿಸಲು ಸರ್ಕಾರ ಮುಂದಾಗುವುದೇ?

ಶ್ರೀ ಎ. ಕೃಷ್ಣಪ್ಪ (ಪಶುಸಂಗೋಪನಾ ಮತ್ತು ಸಕ್ಕರೆ ಸಚಿವರು) :—

೧ ರಿಂದ ೪) ರಾಜ್ಯದ ಬೆಳಗಾಂ ಜಿಲ್ಲೆಯ ರಾಯಬಾಗ್ ಸಕ್ಕರೆ ಕಾರ್ಖಾನೆಗೆ ನುರಿಸಲು ಕಬ್ಬು ಪೂರೈಸಿದ ರೈತರಿಗೆ ಕಬ್ಬಿನ ಬಗ್ಗೆ ಬಾಕಿ ಪಾವತಿಸಲು ಕೈಗೊಳ್ಳಬಹುದಾದ